ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಕೊರತೆಯಿರುವ ವೈದ್ಯರು

512(902); ಶ್ರೀ ಮಧು ಬಂಗಾರಪ್ಪ ಎಸ್. (ಸೊರಬ)

ಅ) ರಾಜ್ಯದಲ್ಲಿರುವ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗಳಲ್ಲಿ ವೈದ್ಯರು, ದಾದಿಯರು ಮತ್ತು ಇತರೆ ಸಿಬ್ಬಂದಿಗಳ ಹುದ್ದೆಗಳು ಖಾಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಖಾಲಿ ಇರುವ ಈ ಹುದ್ದೆಗಳನ್ನು ತುಂಬಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು;

ಇ) ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳನ್ನು ತುಂಬಲು ವೈದ್ಯಕೀಯ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುವ ವೈದ್ಯರಿಗೆ ಸಮಾನವಾದ ವೇತನವನ್ನು ಸರ್ಕಾರಿ ಆಸ್ಪತ್ರೆಯ ವೈದ್ಯರಿಗೂ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಈ) ಹಾಗಿದ್ದಲ್ಲಿ, ಪ್ರಸ್ತುತ ಈ ವೈದ್ಯರುಗಳಿಗೆ ನೀಡುತ್ತಿರುವ ವೇತನದ ಪ್ರಮಾಣ ಎಷ್ಟು? (ಪೂರ್ಣ ವಿವರಗಳನ್ನು ನೀಡುವುದು)

ಶ್ರೀ ಯು.ಟಿ. ಖಾದರ್ (ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) ಬಂದಿದೆ.

ಆ) ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದುಕೊಂಡ ಕ್ರಮಗಳ ಬಗ್ಗೆ ಅನುಬಂಧ–1 ರಲ್ಲಿ ನೀಡಲಾಗಿದೆ.

ಇ) ಇಲ್ಲ

ಈ) ಉದ್ಭವಿಸುವುದಿಲ್ಲ

ಅನುಬಂಧ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿ ಬರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿಯಿರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ, ತಜ್ಞ ವೈದ್ಯರು, ಮತ್ತು ಇತರೆ ಸಿಬ್ಬಂದಿ ಹುದ್ದೆಗಳನ್ನು ತುಂಬಲು ತೆಗೆದುಕೊಂಡ ಕ್ರಮಗಳ ವಿವರಗಳು:

1. ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ (ಎನ್.ಆರ್.ಹೆಚ್.ಎಂ.)ದ ಅಡಿಯಲ್ಲಿ ಸ್ತ್ರೀರೋಗ ತಜ್ಞತೆ, ಅರವಳಿಕೆ ಹಾಗೂ ಮಕ್ಕಳ ತಜ್ಞತೆಯಲ್ಲಿ ಗೌರವ ಧನದ ಆಧಾರದ ಮೇಲೆ ತಜ್ಞ ವೈದ್ಯರನ್ನು ನೇಮಿಸಿಕೊಳ್ಳಲು ಸಿ–ಗುಂಪಿನ ಜಿಲ್ಲೆಗಳು ಹಾಗೂ ಉತ್ತರಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ₹ 80,000 ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ₹ 60,000 ದಂತೆ ನೀಡಲು ಅವಕಾಶ ಕಲ್ಪಿಸಲಾಗಿದೆ.

2. ಕೆ.ಹೆಚ್.ಎಸ್.ಡಿ.ಆರ್.ಪಿ ಯೋಜನೆಯಡಿಯಲ್ಲಿ ಇತರೆ ತಜ್ಞತೆಗಳಿಗೆ (ಮಕ್ಕಳ ತಜ್ಞರು, ಸ್ತ್ರೀರೋಗ ತಜ್ಞರು ಹಾಗೂ ಅರವಳಿಕೆ ತಜ್ಞರನ್ನು ಹೊರತುಪಡಿಸಿ) ಸಂಬಂಧಪಟ್ಟಂತೆ, ಮೇಲೆ ತಿಳಿಸಿದ ಜಿಲ್ಲೆಗಳಿಗೆ ಕ್ರಮವಾಗಿ ಮಾಸಿಕ ₹. 65,000 ಹಾಗೂ ₹ 50,000 ದಂತೆ ಗೌರವಧನ ನೀಡಲಾಗುತ್ತಿದೆ. ಮುಂದುವರೆದು, ರೀಟೈನರ್‌ಷಿಪ್ ಆಧಾರದಲ್ಲಿ ನೇಮಕ ಮಾಡುವ ಎಲ್ಲಾ ತಜ್ಞ ವೈದ್ಯರಿಗೆ ಸಂಬಂಧಿಸಿದಂತೆ ನೀಡಲಾಗುತ್ತಿದ್ದ ಗೌರವಧನವನ್ನು ಸಿ–ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ₹ 5,000 ದಿಂದ ₹ 10,000ಕ್ಕೆ ಹೆಚ್ಚಿಸಿ ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ₹ 8,000 ದಂತೆ ನೀಡಿ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಮುಂದುವರೆದು, ಸದರಿ ತಜ್ಞರು ಹೊರ ರೋಗಿ ವಿಭಾಗದಲ್ಲಿ ಕಾರ್ಯನಿರ್ವಹಿಸಿದ್ದಲ್ಲಿ ದಿನವೊಂದಕ್ಕೆ ₹ 1,000 ದಂತೆ ಗೌರವ ಧನ ನೀಡಲು ಅವಕಾಶ ಕಲ್ಪಿಸಲಾಗಿದೆ.

3. ಮೇಲೆ ತಿಳಿಸಿದಂತೆ ಎನ್.ಆರ್.ಹೆಚ್.ಎಂ./ಕೆ.ಹೆಚ್.ಎಸ್.ಡಿ.ಆರ್.ಪಿ. ಅಡಿಯಲ್ಲಿ ಅವಕಾಶಗಳನ್ನು ಕಲ್ಪಿಸಿದ್ದಾಗ್ಯೂ, ಎನ್.ಆರ್.ಹೆಚ್.ಎಂ. ಅಡಿಯಲ್ಲಿ ಕೇವಲ 60 ತಜ್ಞ ವೈದ್ಯರು ಮತ್ತು 70 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಹಾಗೂ ಕೆ.ಹೆಚ್.ಎಸ್.ಡಿ.ಆರ್.ಪಿ. ಅಡಿಯಲ್ಲಿ ಕೇವಲ 63 ವಿವಿಧ ತಜ್ಞತೆ ಹೊಂದಿರುವ ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಮುಂದೆ ಬರುತ್ತಿರುವವರ ಸಂಖ್ಯೆ ಉತ್ತೇಜನಕಾರಿಯಾಗಿಲ್ಲ.

4. ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರ ಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು, ಈ ಮೂಲಕ ಸ್ತ್ರೀರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ.

5. ಕರ್ನಾಟಕ ಲೋಕಸಭಾ ಆಯೋಗದ ಮೂಲಕ 600 ತಜ್ಞ ವೈದ್ಯರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಇತ್ತೀಚೆಗೆ ಕ್ರಮ ಕೈಗೊಳ್ಳಲಾಗಿ ಒಟ್ಟು 252 ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದರು. ಆಯ್ಕೆಯಾದ ಎಲ್ಲಾ 252 ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳ ನಿಯುಕ್ತಿ ಮಾಡಲು ಕ್ರಮ ಕೈಗೊಳ್ಳಲಾಗಿ, ಕೇವಲ 137 ಅಭ್ಯರ್ಥಿಗಳು ಸ್ಥಳ ಆಯ್ಕೆ 75 ಅಭ್ಯರ್ಥಿಗಳು ಮಾತ್ರ ಕಾರ್ಯವರದಿ ಮಾಡಿಕೊಂಡಿದ್ದಾರೆ.

6. ಎಂ.ಬಿ.ಬಿ.ಎಸ್. ವಿದ್ಯಾರ್ಹತೆಯ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಒಟ್ಟು 2586 ಹುದ್ದೆಗಳು ಮಂಜೂರಾಗಿದ್ದು, ಆ ಪೈಕಿ ಇತ್ತೀಚೆಗೆ ಗುತ್ತಿಗೆ ಆಧಾರದ ಮೇಲೆ 118 ಅಲೋಪತಿ ಮತ್ತು 45 ಆಯುಷ್ ಹಾಗೂ 230 ಬಂಧ-ಪತ್ರ ಅನುಷ್ಠಾನಕೋಶದಿಂದ ನೇಮಕಗೊಂಡು ವೈದ್ಯರು ಸೇರಿದಂತೆ ಒಟ್ಟು 2341 ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. 245 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿಯಿವೆ. ದಿನಾಂಕ:28-6-2013 ರಂದು ಖಾಲಿ ಇರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಲು ಜಿಲ್ಲಾಧಿಕಾರಿಗಳಿಗೆ ಸರ್ಕಾರವು ಅನುಮತಿ ನೀಡಿದೆ. ನೇಮಕಾತಿ ಪ್ರಕ್ರಿಯೆಯು ಚಾಲ್ತಿಯಲ್ಲಿದೆ.

7. ಇಲಾಖೆಯಲ್ಲಿ ಬ್ಯಾಕ್ ಲಾಗ್ ಇದ್ದ ಹುದ್ದೆಗಳಲ್ಲಿ 107 ಕಿರಿಯ ಆರೋಗ್ಯ ಸಹಾಯಕರು (ಪುರುಷ) ಮತ್ತು 16 ಫಾರ್ಮಸಿಸ್ಟ್ ಹುದ್ದೆಗಳಿಗೆ ನೇಮಕಾತಿ ಆದೇಶವನ್ನು ಇತ್ತೀಚಿಗೆ ನೀಡಲಾಗಿದೆ.

8. ಆರೋಗ್ಯ ಇಲಾಖೆಯಲ್ಲಿ ಈ ಕೆಳಕಂಡ ನೇರ ನೇಮಕಾತಿ ಮಾಡಲು ಪ್ರಕ್ರಿಯೆ ಜಾರಿಯಲ್ಲಿದ್ದು ಈ ಪ್ರಕ್ರಿಯೆಯು ಅಂತಿಮ ಹಂತದಲ್ಲಿರುತ್ತದೆ.

ಕ್ರ.ಸಂ.	ಹುದ್ದೆಗಳ ಪದನಾಮ	ಅಧಿಸೂಚಿಸಿರುವ ಹುದ್ದೆಗಳ ಸಂಖ್ಯೆ
1	ಕಿರಿಯ ಆರೋಗ್ಯ ಸಹಾಯಕರು (ಪುರುಷ)	314
2	ಕಿರಿಯ ಆರೋಗ್ಯ ಸಹಾಯಕರು (ಮಹಿಳೆ)	735
3	ಕುಷ್ಠರೋಗದಿಂದ ಗುಣಮುಖಹೊಂದಿದ ಗ್ರೂಪ್ 'ಡಿ' ಹುದ್ದೆಗಳು	100
4	ಹಾಸ್ಪಿಟಲ್ ಅಟೆಂಡೆಂಟ್ ಗ್ರೇಡ್–2 ಗ್ರೂಪ್ ' ಡಿ'	2323
	ಒಟ್ಟು	3579

9. ಈ ಕೆಳಕಂಡ ಖಾಲಿ ಹುದ್ದೆಗಳನ್ನು ವಿಶೇಷ ನೇರ ನೇಮಕಾತಿ ಸಮಿತಿಯ ಮುಖಾಂತರ ಭರ್ತಿ ಮಾಡಲು ಆರ್ಥಿಕ ಇಲಾಖೆ ಅನುಮತಿ ನೀಡಿದ್ದು, ಹೈದ್ರಾಬಾದ್–ಕರ್ನಾಟಕ ಭಾಗದ ಮೀಸಲಾಗಿ ನಿಯಮಗಳ ಬಗ್ಗೆ ಆದೇಶ ಬಂದ ತಕ್ಷಣ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಕ್ರ.ಸಂ.	ಹುದ್ದೆ	ಭರ್ತಿ ಮಾಡುವ ಸಂಖ್ಯೆ
1	ವಾಹನ ಚಾಲಕರು	318
2	ಗ್ರೂಪ್ ಸಿ ವೃಂದದ ಅರೆವೈದ್ಯಕೀಯ ಹುದ್ದೆಗಳು	450
3	ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿ	331
4	ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ	145
5	ಹಿರಿಯ ಪ್ರಯೋಗ ಶಾಲಾ ಟೆಕ್ನಾಲಾಜಿಸ್ಟ್	87
	ಒಟ್ಟು	**1331**